# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 267 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15.02.2024 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಜಮಲಾಬಾದ್ ಕೋಟೆ ಚಂದ್ಕೂರು ದೇವಸ್ಥಾನ ಬಳಿ ಇರುವ ಪ್ರವಾಸೋದ್ಯಮ ಇಲಾಖೆಯ ವಸತಿ ಗೃಹ ನಿರ್ಮಾಣ ಕಾಮಗಾರಿಯು ಪ್ರಾರಂಭಗೊಂಡಿದ್ದು ಯಾವಾಗ; | ಪ್ರವಾಸೋದ್ಯಮ ಇಲಾಖೆಯಿಂದ 2015-16ನೇ ಸಾಲಿನ ಬಂಡವಾಳ ವೆಚ್ಚಗಳ ಅಡಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕಿನ ನಡ ಗ್ರಾಮದ ಜಮಲಾಬಾದ್ ಕೋಟೆ ಪ್ರದೇಶದಲ್ಲಿ 10 ಕೊಠಡಿಗಳ ಯಾತ್ರಿನಿವಾಸ ನಿರ್ಮಾಣ ಕಾಮಗಾರಿಯನ್ನು ರೂ.40.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಸರ್ಕಾರದಿಂದ ದಿನಾಂಕ: 18-08-2015 ರಂದು ಅನುಮೋದನೆ ನೀಡಲಾಗಿದೆ.<br><br>ಸದರಿ ಕಾಮಗಾರಿಗೆ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ ರವರು ದಿನಾಂಕ: 13-06-2018ರಂದು ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತಾರೆ.<br><br>2018ನೇ ಸಾಲಿನಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ. |
| ಆ) | ಸದರಿ ವಸತಿ ಗೃಹಗಳ ಕಾಮಗಾರಿಯ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ; ಕಾಮಗಾರಿಯು ವಿಳಂಬಕ್ಕೆ ಕಾರಣವೇನು; ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು; ವಿಸ್ತೃತವಾದ ವರದಿಯನ್ನು ನೀಡುವುದು? | ಸದರಿ ಕಾಮಗಾರಿಯ ಕಟ್ಟಡದ ಪ್ಲಾಸ್ಟರಿಂಗ್ ಕಾಮಗಾರಿ ಪೂರ್ಣಗೊಂಡಿದೆ. ಈ ಕಾಮಗಾರಿಗೆ ಇಲಾಖೆಯಿಂದ ಈಗಾಗಲೇ ರೂ.20.00 ಲಕ್ಷಗಳನ್ನು ಬಿಡುಗಡೆಗೊಳಿಸಿದ್ದು, ರೂ.20.00 ಲಕ್ಷಗಳಿಗೆ ಅನುಷ್ಠಾನ ಸಂಸ್ಥೆಯವರು ಹಣಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ.<br><br>ಪ್ರವಾಸೋದ್ಯಮ ಇಲಾಖೆಗೆ ಕೋವಿಡ್-19ರ ಹಿನ್ನೆಲೆಯಲ್ಲಿ, 2020-21 ಮತ್ತು 2021-22ನೇ ಸಾಲುಗಳಲ್ಲಿ ಬಂಡವಾಳ ವೆಚ್ಚಗಳ ಲೆಕ್ಕಶೀರ್ಷಿಕೆಯಡಿಯಲ್ಲಿ ಕ್ರಮವಾಗಿ ರೂ.35.00 ಕೋಟಿ ಹಾಗೂ ರೂ.71.00 ಕೋಟಿಗಳನ್ನು ಮಾತ್ರ ಒದಗಿಸಿದ್ದು, 2022-23ನೇ ಸಾಲಿನಲ್ಲಿ ರೂ.73.50 ಕೋಟಿಗಳನ್ನು ಮಾತ್ರ ಒದಗಿಸಿದ್ದು, 900ಕ್ಕೂ ಅಧಿಕ ಮುಂದುವರೆದ ಕಾಮಗಾರಿಗಳಿದ್ದು, ಈ ಪೈಕಿ ಪೂರ್ಣಗೊಂಡಿರುವ ಹಾಗೂ ಪೂರ್ಣಗೊಳ್ಳುವ ಹಂತದಲ್ಲಿರುವ ಕಾಮಗಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದುದರಿಂದ, 2020-21, 2021-22 ಮತ್ತು 2022-23ನೇ ಸಾಲುಗಳಲ್ಲಿ ಅನುದಾನದ ಕೊರತೆಯಿಂದ ಸದರಿ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲು ಸಾಧ್ಯವಾಗಿರುವುದಿಲ್ಲ.<br><br>ಈ ಕಾಮಗಾರಿಯ ಅನುಷ್ಠಾನ ಸಂಸ್ಥೆಯಾದ ನಿರ್ಮಿತಿ ಕೇಂದ್ರದವರು ಅನುದಾನ ಬಿಡುಗಡೆಯಾದಲ್ಲಿ 6 ತಿಂಗಳ ಒಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ತಿಳಿಸಿದ್ದು, ಬಾಕಿ ಉಳಿದ ಅನುದಾನವನ್ನು ಬಿಡುಗಡೆ ಮಾಡಲು ಪ್ರಸ್ತುತ ಸಾಲಿನಲ್ಲಿ ಇಲಾಖೆಗೆ ಒದಗಿಸಿರುವ ಅನುದಾನದ ಲಭ್ಯತೆಗನುಗುಣವಾಗಿ ಪರಿಶೀಲಿಸಲಾಗುವುದು. |

**ಸಂಖ್ಯೆ: TOR 49 TDV 2024**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು